ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ ಸಿ1(4) ನಿಯೋಜನೆ: 25/2013-14 ದಿನಾಂಕ: 29-07-2013

**ಅಧಿಕೃತಜ್ಞಾಪನ**

ವಿಷಯ:-ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿರಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಕೆಲಸದ ನಿರ್ವಹಣೆಯ ಬಗ್ಗೆ

ಉಲ್ಲೇಖ:-1.ಈ ಕಛೇರಿಯ ಜ್ಞಾಪನ ಸಮ ಸಂಖ್ಯೆ ದಿನಾಂಕ: 02-07-2013.

2.ಮಾನ್ಯ ಆಯುಕ್ತರ ಟಿಪ್ಪಣಿ ಸಂಖ್ಯೆ:ಆ.ಆಶಾ.ಸಾ.ಸಂ.ಅ:17/2013-14 ದಿನಾಂಕ:12.07.2013

-*****-

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿಯ ಸಾರ್ವಜನಿಕ ಸಂಪರ್ಕಾಧಿಕಾರಿಗಳಿಗೆ ಈ ಕೆಳಕಂಡ ಅಂಶಗಳನ್ನೊಳಗೊಂಡಂತೆ ಕೆಲಸದ ನಿರ್ವಹಣೆಯನ್ನು ನೀಡಲು ಅಗತ್ಯ ಕ್ರಮ ವಹಿಸುವಂತೆ ಉಲ್ಲೇಖ-2ರಲ್ಲಿ ನಿರ್ದೇಶನವಿರುತ್ತದೆ. ಅದರಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿಯ ಸಾರ್ವಜನಿಕ ಸಂಪರ್ಕಾಧಿಕಾರಿಗಳು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಈ ಕೆಳಕಂಡಂತೆ ಕೆಲಸ ನಿರ್ವಹಿಸಲು ಆದೇಶಿಸಿದೆ.

1) ಸಾರ್ವಜನಿಕ ಸಂಪರ್ಕಾಧಿಕಾರಿಗಳು ಸಹನಿರ್ದೇಶಕರು (ಶಾಲಾ ಶಿಕ್ಷಣ) ಇವರ ಅಧೀನದಲ್ಲಿ ತಕ್ಷಣದಿಂದಲೇ ಜಾರಿಗೆ ಬರುವಂತೆ ಕಾರ್ಯ ನಿರ್ವಹಿಸುವುದು.
2) ಸಾರ್ವಜನಿಕ ದೂರುಗಳು, ಕುಂದುಕೊರತೆ ಹಾಗೂ ಅಹವಾಲುಗಳನ್ನು ಮಾನ್ಯ ಆಯುಕ್ತರ ಪರವಾಗಿ ಸ್ವೀಕರಿಸುವುದು. ಈ ಕುರಿತಂತೆ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸಮನ್ವಯ ವಹಿಸುವುದು ಹಾಗೂ ಅಹವಾಲುಗಳನ್ನು ನಿರ್ವಹಿಸಲು ಇ-ಆಡಳಿತ ಶಾಖೆಯ ಸಹಕಾರದೊಂದಿಗೆ ಸೂಕ್ತ ತಂತ್ರಾಂಶವನ್ನು ಸಿದ್ದಪಡಿಸಿ ಪ್ರಚುರಪಡಿಸುವುದು.
3) ಇಲಾಖೆಯ ಯಾವುದೇ ಕಛೇರಿಗಳಲ್ಲಿ, ಶಾಖೆಗಳಲ್ಲಿ ಹೊರಡುವ ಆದೇಶಗಳು, ಜ್ಞಾಪನಗಳು, ಸುತ್ತೋಲೆಗಳು ಕಡ್ಡಾಯವಾಗಿ ಸಾರ್ವಜನಿಕ ಸಂಪರ್ಕ ಅಧಿಕಾರಿಗಳ ಶಾಖೆಗೆ ತಲುಪುವಂತೆ ಕ್ರಮ ವಹಿಸುವುದು ಹಾಗೂ ಈ ಪತ್ರಗಳನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕ್ರಮ ವಹಿಸುವುದು ಮತ್ತು ಈ ಬಗ್ಗೆ ಸಾರ್ವಜನಿಕರಿಂದ ಕೋರಿಕೆ ಬಂದಲ್ಲಿ ಮಾಹಿತಿ ಒದಗಿಸುವುದು.
4) ಇಲಾಖೆಗೆ ಸಂಬಂಧಿಸಿದಂತೆ ದಿನಪತ್ರಿಕೆಗಳು ಹಾಗೂ ಮಾಧ್ಯಮಗಳಲ್ಲಿ ಬರುವ ವಿಷಯಗಳನ್ನು ಮಾನ್ಯ ಆಯುಕ್ತರ ಗಮನಕ್ಕೆ ತರುವುದು ಹಾಗೂ ಅವುಗಳಿಗೆ ಸೂಕ್ತ ಸ್ಪಷ್ಟೀಕರಣ/ಹಿಂಬರಹಗಳನ್ನು ನೀಡುವುದು ಮತ್ತು ಹಿಂಬಾಲಿಸುವುದು.
5) ಸರ್ಕಾರೇತರ ಸಂಘ-ಸಂಸ್ಥೆಗಳು ಶಾಲೆಗಳ ಭೌತಿಕ ಅಭಿವೃದ್ಧಿಗಾಗಿ ಹಾಗೂ ಶೈಕ್ಷಣಿಕ ಕಾರ್ಯಯೋಜನೆ ಸಿದ್ಧಪಡಿಸಿ ಸಲ್ಲಿಸಿರುವ ಪ್ರಸ್ತಾವನೆಗಳೊಂದಿಗೆ ಮಾನ್ಯ ಆಯುಕ್ತರು ಹಾಗೂ ಸಂಬಂಧಿಸಿದ ಇತರೆ ಅಧಿಕಾರಿಗಳೊಂದಿಗೆ ಸಮನ್ವಯ ವಹಿಸುವುದು.
6) ಶಾಲೆಗಾಗಿ ನಾವು-ನೀವು ಯೋಜನೆಯಡಿಯಲ್ಲಿ ಪಾಲ್ಗೊಳ್ಳುವ ಭಾಗಿದಾರರಿಗೆ ಸೂಕ್ತ ಮಾರ್ಗದರ್ಶನ ನೀಡುವುದು.
7) ಹೊರ ರಾಜ್ಯಗಳಿಂದ ಹಾಗೂ ವಿದೇಶದಿಂದ ಶೈಕ್ಷಣಿಕ ಅಧ್ಯಯನಕ್ಕಾಗಿ ಭೇಟಿ ನೀಡುವ ಅಧಿಕಾರಿ ಹಾಗೂ ತಂಡಗಳೊಂದಿಗೆ ಸಮನ್ವಯ ವಹಿಸುವುದು.
8) ಇಲಾಖೆಯ ಕಾರ್ಯಕ್ರಮಗಳು, ರಾಷ್ಟ್ರೀಯ ದಿನಾಚರಣೆಗಳು, ಕನ್ನಡ ರಾಜ್ಯೋತ್ಸವ ಹಾಗೂ ಇತರೆ ಪ್ರಮುಖ ಕಾರ್ಯಕ್ರಮಗಳ ಚಟುವಟಿಕೆಗಳ ಬಗ್ಗೆ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸಮನ್ವಯವಹಿಸಿ ಮಾನ್ಯ ಆಯುಕ್ತರ ಗಮನಕ್ಕೆ ತರುವುದು.

9) ಇಲಾಖೆಯಿಂದ ಮಾಧ್ಯಮ / ಪತ್ರಿಕೆಗಳಿಗೆ ನೀಡಲಾಗುವ ಮಾಹಿತಿಗಳನ್ನು ಸಂಬಂಧಿಸಿದ ಮಾಧ್ಯಮ / ಪತ್ರಿಕಾ ಕಛೇರಿಗಳಿಗೆ ತಲುಪಿಸುವುದು ಮತ್ತು ಹಾಗೂ ಇಲಾಖೆಯಿಂದ ಏರ್ಪಡಿಸಲಾಗುವ ಪತ್ರಿಕಾ ಗೋಷ್ಠಿಗಳ ಸಮಯದಲ್ಲಿ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಅಗತ್ಯ ಸಮನ್ವಯ ವಹಿಸುವುದು.

10) ಮಾನ್ಯ ಮುಖ್ಯ ಮಂತ್ರಿಗಳು, ಮಾನ್ಯ ಶಿಕ್ಷಣ ಸಚಿವರು, ಇತರೆ ಉನ್ನತ ಕಛೇರಿಗಳು ಹಾಗೂ ಸರ್ಕಾರದಿಂದ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಕೋರಲಾಗುವ ಪ್ರಮುಖ ಕಾರ್ಯಕ್ರಮಗಳ ಮಾಹಿತಿಯನ್ನು ಇಲಾಖೆಯ ಸಂಬಂಧಿಸಿದ ಅಧಿಕಾರಿಗಳಿಂದ ಪಡೆದು ಕ್ರೋಢೀಕರಿಸಿ ಸಂಬಂಧಿಸಿದವರಿಗೆ ಸಕಾಲದಲ್ಲಿ ತಲುಪಿಸುವುದು.

11) ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಏರ್ಪಡಿಸಲಾಗುವ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮಾನ್ಯ ಮುಖ್ಯ ಮಂತ್ರಿಗಳು, ಮಾನ್ಯ ಶಿಕ್ಷಣ ಸಚಿವರು, ಇತರೆ ಉನ್ನತ ಅಧಿಕಾರಿಗಳಿಗೆ ಭಾಷಣದ ಕರಡು ತಯಾರಿಸಿ ನೀಡುವುದು.

12) ಮಾನ್ಯ ಆಯುಕ್ತರು/ಅಪರ ಆಯುಕ್ತರು ವಹಿಸುವ ಇತರೆ ಯಾವುದೇ ಕೆಲಸ ಕಾರ್ಯಗಳನ್ನು ತಪ್ಪದೇ ನಿರ್ವಹಿಸುವುದು.

(ಆಯುಕ್ತರ ಆದೇಶದ ಮೇರೆಗೆ)

(ಕೆ.ಪಿ. ಹನುಮಂತರಾಂಪುಪ್ಪ)
ಅಪರ ಆಯುಕ್ತರು (ಆಡಳಿತ)
(ಹೆಚ್ಚುವರಿ ಪ್ರಭಾರ)

ಗೆ,

1. ಶ್ರೀಮತಿ ಸುಮ, ವಿಷಯ ಪರಿವೀಕ್ಷಕರು (ಹಿಂದಿ) ಸಹ ನಿರ್ದೇಶಕರು-1 ವಿಭಾಗ, ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

ಪ್ರತಿಯನ್ನು:-

1. ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ ಬಹುಮಹಡಿ ಕಟ್ಟಡ, ಬೆಂಗಳೂರು
2. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ ಬೆಂಗಳೂರು
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
5. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
6. ಬೆಂಗಳೂರು ಮೈಸೂರು ವಿಭಾಗದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ.
7. ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಸಹ ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪ್ರಾದೇಶಿಕ ಪರೀಕ್ಷಾ ಮಂಡಳಿ. ಮೈಸೂರು, ಬೆಳಗಾವಿ, ಗುಲ್ಬರ್ಗಾ
8. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.
9. ಸಹ ನಿರ್ದೇಶಕರು-1 ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
10. ರಾಜ್ಯದ ಎಲ್ಲಾ ಸಿ.ಟಿ.ಇ ಪ್ರಾಂಶುಪಾಲರುಗಳಿಗೆ.
11. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪ ನಿರ್ದೇಶಕರಿಗೆ (ಆಡಳಿತ)
12. ರಾಜ್ಯದ ಎಲ್ಲಾ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಂಶುಪಾಲರಿಗೆ
13. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ.
14. ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ ಮಾಹಿತಿಗಾಗಿ.
15. ಹಿರಿಯ ಸಹಾಯಕ ನಿರ್ದೇಶಕರು ಇ ಆಡಳಿತ ಶಾಖೆ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
16. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
17. ಕಛೇರಿ ಪ್ರತಿ.